ಆಕಾಶವಾಣಿ
ಪ್ರದೇಶ ಸಮಾಚಾರ
ಓದುತ್ತಿರುವವರು ರವಿ ಕುಲಕರ್ಣಿ 4-12-25

ಮುಖ್ಯಾಂಶಗಳು

- ಹುಬ್ಬಳ್ಳಿ, ಗದಗ ಬೈಪಾಸ್ ಮೂಲಕ ವಿಜಯಪುರ ರೈಲು ಸಂಚಾರಕ್ಕೆ ಅನುಮತಿ– ಸಚಿವ ಎಂ.ಬಿ.ಪಾಟೀಲ ಮಾಹಿತಿ.

- ಅತ್ಯಾಧುನಿಕ ತಂತ್ರಜ್ಞಾನ ಬಳಕೆ ಹಾಗೂ ಸಹಬಾಳ್ವೆಯಿಂದ ಮಾತ್ರ ಮಾನವ-ವನ್ಯಜೀವಿ ಸಂಘರ್ಷ ತಡೆಯಲು ಸಾಧ್ಯ-ಅರಣ್ಯ ಖಾತೆ ಸಚಿವರ ಅಭಿಮತ.

- ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ರಾಜ್ಯಾದ್ಯಂತ ನಿನ್ನೆ ವಿಶ್ವ ವಿಶೇಷಚೇತನರ ದಿನ ಆಚರಣೆ.

- ಪ್ರಯಾಣಿಕರ ಸುರಕ್ಷತೆ, ಭದ್ರತೆ ಹಾಗೂ ಸೌಕರ್ಯ ಖಚಿತಪಡಿಸಲು ರೈಲ್ವೆ ರಕ್ಷಣಾ ಪಡೆಯಿಂದ ನಿರಂತರ ಕ್ರಮ.

ಈಗ ವಾರ್ತೆಗಳ ವಿವರ

*******

ಬೆಂಗಳೂರು-ವಿಜಯಪುರ ನಡುವೆ ಹುಬ್ಬಳ್ಳಿ ಹಾಗೂ ಗದಗ ಬೈಪಾಸ್ ಮಾರ್ಗಗಳಲ್ಲಿ ರೈಲು ಓಡಿಸಲು ಅನುಮತಿ ನೀಡಲಾಗಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ. ಬೆಂಗಳೂರಿನ ಖನಿಜ ಭವನದಲ್ಲಿ ನಡೆದ ಸಭೆಯಲ್ಲಿ ಈ ವಿಷಯ ತಿಳಿಸಿದ ಅವರು, ಈಗ ಚಾಲ್ತಿಯಲ್ಲಿರುವ ರೈಲುಗಳ ಮಾರ್ಗವನ್ನು ಬದಲಿಸಲು ಸಾಧ್ಯವಿಲ್ಲ. ಇದಕ್ಕಾಗಿ ರೈಲ್ವೇ ಮಂಡಳಿಯಿಂದ ಹೊಸ ರೈಲುಗಳನ್ನು ಮಂಜೂರು ಮಾಡಿಸಿಕೊಳ್ಳಬೇಕು ಎಂದು ನೈರುತ್ಯ ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ. ಈ ಸಂಬಂಧ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈ ್ಣವ್ ಹಾಗೂ ವಿ.ಸೋಮಣ್ಣ ಅವರಿಗೆ ಪತ್ರ ಬರೆಯಲಾಗುವುದು ಎಂದರು. ವಿಜಯಪುರ-ಬೆಂಗಳೂರು ನಡುವಿನ ಪ್ರಯಾಣ ಅವಧಿ ಕಡಿಮೆ ಮಾಡಲು ಪ್ರಯತ್ನಗಳು ನಡೆಯುತ್ತಿವೆ. ಬೆಂಗಳೂರಿನಿಂದ ಹುಬ್ಬಳ್ಳಿಯವರೆಗೆ ನಿಯಮಿತ ನಿಲುಗಡೆಗಳನ್ನು ಮಾತ್ರ ಕೊಟ್ಟು, ಅಲ್ಲಿಂದ ಮುಂದೆ ವಿಜಯಪುರದವರೆಗೆ ರೈಲು ಸೇವೆ ಆರಂಭಿಸಿದರೆ ಹೆಚ್ಚು ಪರಿಣಾಮಕಾರಿ ಆಗಲಿದೆ ಎಂಬುದನ್ನು ರೈಲ್ವೆ ಅಧಿಕಾರಿಗಳಿಗೆ ಮನದಟ್ಟು ಮಾಡಲಾಗಿದೆ ಎಂದು ಸಚಿವರು ಹೇಳಿದರು.

*******

ಅತ್ಯಾಧುನಿಕ ತಂತ್ರಜ್ಞಾನ ಬಳಕೆ ಹಾಗೂ ಸಹಬಾಳ್ವೆಯಿಂದ ಮಾತ್ರ ಮಾನವ-ವನ್ಯಜೀವಿ ಸಂಘರ್ಷ ತಡೆಯಲು ಸಾಧ್ಯ ಎಂದು ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ. ಚಾಮರಾಜನಗರ ಜಿಲ್ಲೆಯ ಕೊಳ್ಳೆಗಾಲದ ಮಲೈಮಹದೇಶ್ವರ

ವನ್ಯಜೀವಿ ವಿಭಾಗದ ಅರಣ್ಯ ಇಲಾಖೆ ಕಚೇರಿ ಆವರಣದಲ್ಲಿ ಸಮಗ್ರ ಕಮಾಂಡ್ ಸೆಂಟರ್ ಉದ್ಘಾಟಿಸಿ ಮಾತನಾಡಿದ ಅವರು, ಕ್ಷೀಣಿಸುತ್ತಿರುವ ಅರಣ್ಯ, ವನ್ಯಜೀವಿಗಳ ಸಂಖ್ಯೆಯಲ್ಲಿ ಹೆಚ್ಚಳ, ಮಾನವ–ವನ್ಯಜೀವಿ ಸಂಘ ್ಷಕ್ಕೆ ಕಾರಣವಾಗಿದೆ. ಗಸ್ತು ಹೆಚ್ಚಳದ ಮೂಲಕ ಹಾಗೂ ಅರಣ್ಯದಂಚಿನ ಜನರಲ್ಲಿ ಸಹಬಾಳ್ವೆಯ ಬಗ್ಗೆ ಅರಿವು ಮೂಡಿಸುವ ಮೂಲಕ ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದಾಗಿದ್ದು, ಈ ನಿಟ್ಟಿನಲ್ಲಿ ಕಮಾಂಡ್ ಕೇಂದ್ರ ಒಂದು ಯಶಸ್ವೀ ಪರಿಹಾರ ಎಂದರು. ಕೃತಕ ಬುದ್ಧಿಮತ್ತೆಯ ಕ್ಯಾಮರಾ, ಥರ್ಮಲ್ ಡ್ರೋನ್ ಕ್ಯಾಮರಾ ಇತ್ಯಾದಿಗಳನ್ನು ಬಳಸಿ ವನ್ಯಜೀವಿಗಳ ಚಲನ ವಲನದ ಬಗ್ಗೆ ನಿಗಾ ಇಡಲು ಸಾಧ್ಯವಿದೆ. ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ರಾಜ್ಯ ಮಟ್ಟದ ಕೇಂದ್ರ ಸಿದ್ಧವಾಗುತ್ತಿದ್ದು, ಅಧಿವೇಶನದ ನಂತರ ಇದನ್ನು ಉದ್ಘಾಟಿಸಲಾಗುವುದು ಎಂದು ಸಚಿವರು ಹೇಳಿದರು.

*******

ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ರಾಯಚೂರಿನ ಯರಮರಸ್ ವಿಮಾನ ನಿಲ್ದಾಣದ ಬಳಿ ನಿರ್ಮಾಣವಾಗುತ್ತಿರುವ ವಸತಿ ಸಮುಚ್ಚಯ ಕಾಮಗಾರಿಯನ್ನು ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಇಲಾಖೆ ಸಚಿವ ಭೈರತಿ ಸುರೇಶ ನಿನ್ನೆ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, 44 ಎಕರೆ ಜಾಗದಲ್ಲಿ 2 ಸಾವಿರದ 419 ಮನೆಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು, ಕಡುಬಡವರಿಗೆ ವಿತರಿಸಲಾಗುವುದು. ವಸತಿ ಸಮುಚ್ಚಯಕ್ಕೆ ಅಗತ್ಯವಿರುವ ರಸ್ತೆ, ಕುಡಿಯುವ ನೀರು ಸೇರಿದಂತೆ ಮತ್ತಿತರ ಮೂಲಸೌಕರ್ಯ ಕಲ್ಪಿಸಲು ಹೆಚ್ಚುವರಿ ಅನುದಾನ ಒದಗಿಸಲಾಗುವುದು ಎಂದು ತಿಳಿಸಿದರು.

*******

ಆರ್ಥಿಕವಾಗಿ ಹಿಂದುಳಿದಿರುವ, ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹಕ್ಕೆ ಪ್ರತಿ ಜೋಡಿಗೆ 50,000 ರೂಪಾಯಿ ಸಹಾಯಧನ ನೀಡಲಾಗುವುದು ಎಂದು ಶಾಸಕ ತನ್ವೀರ್ ಸೇಠ್ ಹೇಳಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸರಳ ವಿವಾಹ ಪ್ರೋತ್ಸಾಹಧನ ಕಾರ್ಯಕ್ರಮದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮೈಸೂರು ಜಿಲ್ಲೆಗೆ 150 ಜೋಡಿಗಳ ಗುರಿ ನಿಗದಿಪಡಿಸಲಾಗಿದ್ದು, ಸರಳ ವಿವಾಹ ಯೋಜನೆಗೆ ಅರ್ಹ ಫಲಾನುಭವಿಗಳನ್ನು ಗುರುತಿಸಬೇಕು ಎಂದು ಸೂಚಿಸಿದರು. ಯಾವುದೇ ಬಾಲ್ಯವಿವಾಹಕ್ಕೆ ಆಸ್ಪದ ಕೊಡದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಿ ಯೋಜನೆಯನ್ನು ಅನು ್ಠಾನಗೊಳಿಸಬೇಕು. ತಂದೆ, ತಾಯಿ ಇಲ್ಲದ ವಧುವನ್ನು ಗುರುತಿಸಿ, ಸರಳ ವಿವಾಹ ಯೋಜನೆಯ ಸವಲತ್ತು ಒದಗಿಸಿದರೆ ಯೋಜನೆ ಹೆಚ್ಚಿನ ಸಾರ್ಥಕತೆ ಪಡೆಯುತ್ತದೆ ಎಂದು ಹೇಳಿದರು.

*******

ಚಾಮರಾಜನಗರ ಜಿಲ್ಲಾ ಬಿಜೆಪಿ ವತಿಯಿಂದ ಕೊಳ್ಳೇಗಾಲದಲ್ಲಿ 'ಸಂವಿಧಾನ ಸಮರ್ಪಣಾ ದಿನ' ಆಯೋಜಿಸಲಾಗಿತ್ತು. ಸಂವಿಧಾನ ಜಾಗೃತಿಗಾಗಿ ಆಯೋಜಿಸಿದ್ದ ಭೀಮನಡೆ ಕಾರ್ಯಕ್ರಮಕ್ಕೆ ವಿಧಾನಪರಿ ್ಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಾರ್ವಜನಿಕರಲ್ಲಿ ಸಂವಿಧಾನದ ಬಗ್ಗೆ

ಅರಿವು ಮೂಡಿಸುವ ನಿಟ್ಟಿನಲ್ಲಿ ನವೆಂಬರ್ 26 ರಿಂದ ಡಿಸೆಂಬರ್ 6 ರವರೆಗೆ ರಾಜ್ಯಾದ್ಯಂತ ಬಿಜೆಪಿಯಿಂದ ಸಂವಿಧಾನ ಸಮರ್ಪಣಾ ದಿನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

*******

ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ರಾಜ್ಯಾದ್ಯಂತ ನಿನ್ನೆ ವಿಶ್ವ ವಿಶೇಷಚೇತನರ ದಿನ ಆಚರಿಸಲಾಯಿತು. ಧಾರವಾಡದಲ್ಲಿ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸರ್ಕಾರದ ವಿವಿಧ ಯೋಜನೆಗಳ ಮೂಲಕ ವಿಶೇಷಚೇತನರ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು. ಅವರ ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದರು. ಶಿವಮೊಗ್ಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಎಸ್.ಎನ್. ಚನ್ನಬಸಪ್ಪ, ವಿಶೇಷಚೇತನರಿಗೆ ಬೇಕಾಗಿರುವುದು ಅನುಕಂಪವಲ್ಲ-ಅವಕಾಶ. ಅದು ದೊರೆತಲ್ಲಿ ಅವರು ಏನು ಬೇಕಾದರೂ ಸಾಧಿಸುತ್ತಾರ ಎನ್ನುವುದನ್ನು ಈಗಾಗಲೇ ಹಲವು ಕ್ಷೇತ್ರಗಳಲ್ಲಿ ಸಾಬೀತುಪಡಿಸಿದ್ದಾರೆ ಎಂದರು. ಅಂಧತ್ವ, ದೃಷ್ಟಿದೋ ' ಸೇರಿದಂತೆ ಹಲವು ಅಂಗವೈಕಲ್ಯತೆಗಳ ನಡುವೆಯೂ ಅಪಾರ ಶ್ರಮ, ಪ್ರತಿಭೆಯ ಮೂಲಕ ಹಲವಾರು ವ್ಯಕ್ತಿಗಳು ವಿಶಿಷ್ಠ ಸಾಧನೆ ಮಾಡಿ ಮಾದರಿಯಾಗಿದ್ದಾರೆ. ಅಂಥವರು ನಮಗೆ ಪ್ರೇರಣೆಯಾಗಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಹೇಳಿದರು. ನಗರದಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ವಿಶೇಷಚೇತನರ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಅಂತಾರಾಷ್ಟ್ರೀಯ ವಿಶೇಷಚೇತನರ ದಿನಾಚರಣೆ ಅಂಗವಾಗಿ ಬೆಂಗಳೂರಿನ ಸಮರ್ಥನಂ ಕಲಾ ಕೇಂದ್ರದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ವಿಕಲಚೇತನರಿಗೆ ತ್ರಿಚಕ್ರ ವಾಹನ, ಆಕ್ಸಿಜನ್ ಕಿಟ್ ಮತ್ತಿತರ ಸಲಕರಣೆಗಳನ್ನು ವಿತರಿಸಲಾಯಿತು.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ-32 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಪ್ರಯಾಣಿಕರ ಸುರಕ್ಷತೆ, ಭದ್ರತೆ,ಸೌಕರ್ಯ ಖಚಿತಪಡಿಸುವಿಕೆ ಹಾಗೂ ಸುಗಮ ಪ್ರಯಾಣದ ಅನುಭವ ಒದಗಿಸುವ ನಿಟ್ಟಿನಲ್ಲಿ ರೈಲ್ವೆ ರಕ್ಷಣಾ ಪಡೆ-ಆರ್‌ಪಿಎಫ್ ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿದೆ. ಪ್ರಸಕ್ತ ವರ್ಷದ ನವೆಂಬರ್ ತಿಂಗಳಲ್ಲಿ 'ನನ್ನೆ ಫರಿ ್ತೆ' ಕಾರ್ಯಾಚರಣೆಯಡಿ 7 ಹೆಣ್ಣುಮಕ್ಕಳನ್ನು ಒಳಗೊಂಡಂತೆ ಒಟ್ಟು 41 ಮಕ್ಕಳನ್ನು ರಕ್ಷಿಸಲಾಗಿದೆ. 30,41,000 ರೂಪಾಯಿ ಮೌಲ್ಯದ ನಿ ೇಧಿತ ವಸ್ತುಗಳನ್ನು ವಶಪಡಿಸಿಕೊಂಡಿದ್ದು, ಮಹಿಳಾ ಕೇಂದ್ರಿತ 'ಮೇರಿ ಸಹೇಲಿ' ಅಭಿಯಾನದಡಿ ಒಂಟಿಯಾಗಿ ಅಥವಾ ಸಂಗಾತಿಯಿಲ್ಲದೆ ಪ್ರಯಾಣಿಸುವ ಮಹಿಳೆಯರ ಸುರಕ್ಷತೆ ಖಚಿತಪಡಿಸಲು ಕ್ರಮ ಕೈಗೊಳ್ಳಲಾಗಿದೆ.

ಪ್ರಯಾಣಿಕರು ಬಿಟ್ಟುಹೋದ ಲ್ಯಾಪ್‌ಟಾಪ್‌ಗಳು, ಮೊಬೈಲ್‌ಗಳು, ಆಭರಣಗಳು ಹಾಗೂ ಇತರ ವೈಯಕ್ತಿಕ ವಸ್ತುಗಳು ಸೇರಿದಂತೆ ಒಟ್ಟು 15,18,107 ರೂಪಾಯಿ ಮೌಲ್ಯದ ವಸ್ತುಗಳನ್ನು ಆರ್‌ಪಿಎಫ್ ಪತ್ತೆ ಹಚ್ಚಿ ಮಾಲೀಕರಿಗೆ ಹಿಂತಿರುಗಿಸಿದೆ.

*******

ವಿಶ್ವ ಪರಂಪರಾ ತಾಣವಾದ ಹಂಪಿಯ ಸ್ಮಾರಕಗಳು ಮತ್ತು ಪರಂಪರೆ ರಕ್ಷಣೆ ನಿಟ್ಟಿನಲ್ಲಿ ಸ್ಮಾರಕಗಳ ಪರಂಪರೆ ಪುನರುತ್ಥಾನ ವಿದ್ಯಾ ಕೇಂದ್ರ ಸಂಸ್ಥೆ ಇತ್ತೀಚಿಗೆ ಅಧ್ಯಯನ ನಡೆಸಿದೆ. ಹಂಪಿಯ ಹಲವಾರು ದೇವಸ್ಥಾನಗಳು ತಮ್ಮದೇ ಆದ ಐತಿಹಾಸಿಕ ಮತ್ತು ಧಾರ್ಮಿಕ ಮಹತ್ವ ಪಡೆದಿದ್ದು, ರಾಜ್ಯದ ವಿವಿಧ ಪ್ರಸಿದ್ಧ ಸ್ಮಾರಕಗಳ ರಕ್ಷಣೆಗಾಗಿ ಕೇಂದ್ರ ಕಳೆದ 12 ವ ‘ಃಗಳಿಂದ ಕೆಲಸ ನಿರ್ವಹಿಸುತ್ತಿದೆ. ಅಧ್ಯಯನ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹತಿ ನೀಡಿದ್ದಾರೆ ವಿದ್ಯಾರ್ಥಿ ಕೇಂದ್ರದ ಮುಖ್ಯಸ್ಥ ಡಾ. ರಾಜೀವ್ ನೃಪತುಂಗ ಅವರು..

ಧ್ವನಿ–ರಾಜೀವ್ ನೃಪತುಂಗ– 47 ಸೆಕೆಂಡ್ಸ್

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಹುಬ್ಬಳ್ಳಿ, ಗದಗ ಬೈಪಾಸ್ ಮೂಲಕ ವಿಜಯಪುರ ರೈಲು ಸಂಚಾರಕ್ಕೆ ಅನುಮತಿ– ಸಚಿವ ಎಂ.ಬಿ.ಪಾಟೀಲ ಮಾಹಿತಿ.

ಅತ್ಯಾಧುನಿಕ ತಂತ್ರಜ್ಞಾನ ಬಳಕೆ ಹಾಗೂ ಸಹಬಾಳ್ವೆಯಿಂದ ಮಾತ್ರ ಮಾನವ–ವನ್ಯಜೀವಿ ಸಂಘರ್ಷ ತಡೆಯಲು ಸಾಧ್ಯ–ಅರಣ್ಯ ಖಾತೆ ಸಚಿವರ ಅಭಿಮತ.

ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ರಾಜ್ಯಾದ್ಯಂತ ನಿನ್ನೆ ವಿಶ್ವ ವಿಶೇಷಚೇತನರ ದಿನ ಆಚರಣೆ.

ಪ್ರಯಾಣಿಕರ ಸುರಕ್ಷತೆ, ಭದ್ರತೆ ಹಾಗೂ ಸೌಕರ್ಯ ಖಚಿತಪಡಿಸಲು ರೈಲ್ವೆ ರಕ್ಷಣಾ ಪಡೆಯಿಂದ ನಿರಂತರ ಕ್ರಮ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********